ನಾನ್ಯಾಕೆ ಚಿಂತಿಸಲಿ ನಾನ್ಯಾಕೆ ಧೇನಿಸಲಿ
ತಾನಾಗಿ ಶ್ರೀ ರಾಘವೇಂದ್ರಯತಿ ಒಲಿದ || ಪ ||

ಪೋರತನದವನು ಎರಡು ಥೆರೆಗಳಲಿ
ದೂರಾಗಿ ಮೊರೆಯು ಅಲ್ಲವೆಂದು
ಕಾರುಣ್ಯದಿಂದ ತಮ್ಮಯ ಗುರುತುಗಳ ತೋರಿ
ಧೀರ ತಾ ಕರವನ್ನು ಪಿಡಿದ ಬಳಿಕಾ || ೧ ||

ಜಗದೊಳಗೆ ಪದಾರ್ಥಗಳು ಗುಣದಿ ಭುಂಜಿಸುವಂಗೆ
ಆಗದಂಕರನು ತಾನು ಬಳಿಗೆ ಬಂದು
ಬಗೆ ಬಗೆಯಿಂದಲ್ಲಿ ಸುರಸಪದಾರ್ಥಗಳು
ಸೊಗಸಾಗಿ ಉಣಿಸಲು ಚಿಂತೆಯುಂಟೆ || ೨ ||

ಪೂರ್ಣಜಲ ಹರಿವ ವಾಹಿನಿ ಕಂಡು ಬೆದರುವಗೆ
ಕರಣಧಾರನು ತಾನೆ ಬಂದು ನಿಂದು
ತೂರ್ಣದಲಿ ಕರಪಿಡಿದು ಹರಿಗೋಲು ಒಳಗಿಟ್ಟು
ಘೂರ್ಣಿಸಲು ಅವನಿಗೆ ಚಿಂತೆಯುಂಟೆ || ೩ ||

ತನ್ನಯ ಹಿತವು ತಾ ವಿಚಾರಿಸಲವಂಗೆ
ಚೆನ್ನಾಗಿ ಪರಮಗುರು ತಾನೆ ಬಂದು
ಸನ್ಮಾರ್ಗವನು ತಾನೆ ಪೇಳುವೆನೆನಲು
ಇನ್ನು ಆಯಾಸ ಉಂಟೆ || ೪ ||

ಏಸು ಜನ್ಮದಲಿ ಅರ್ಚಿಸಿದೆನೋ ನಾ ಇನ್ನು
**ವಾಸುದೇವವಿಠ್ಠಲ** ಪಾದಪದುಮ
ಲೇಸಾಗಿ ಈ ಸುಕೃತದಿಂದೆನ್ನ ಹರಿದಾಸ
ಈ ಸುಗುಣ ಗುರುರಾಯ ಎನಗೆ ಒಲಿದ || ೫ |